**ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕೋರ್ಟ,**
**ಬಸವನ ಬಾಗೇವಾಡಿ.**

ಸಿಸಿ ನಂಃ 145/2016

ಸಿಡಬ್ಲೂ 02 ಪಿಡಬ್ಲೂ 01

| | | |
|---|---|---|
| ಸಾಕ್ಷಿದಾರರ ಹೆಸರು | ಪ್ರಶಾಂತ ಚಲವಾದಿ | |
| ತಂದೆ/ಗಂಡನ ಹೆಸರು | ನಿಂಗಪ್ಪ | |
| ವಯಸ್ಸು | 50 | ವರ್ಷ |
| ಉದ್ಯೋಗ | ಒಕ್ಕಲುತನ | |
| ವಾಸಸ್ಥಳ | ನಿಡಗುಂದಿ | |

**ಸಾಕ್ಷಿಯನ್ನು ಇಂದು ದಿನಾಂಕಃ 29.10.2025 ರಂದು ಕರೆಯಿಸಿ ಪ್ರಮಾಣೀಕರಿಸಲಾಯಿತು.**
**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದ**

1. ನನಗೆ ಈ ಪ್ರಕರಣದಲ್ಲಿರುವ ಚಾಸಾ-1 ರವರ ಪರಿಚಯ ಇರುವುದಿಲ್ಲ. ಚಾಸಾ-3 ಮತ್ತು 4 ರವರ ಪರಿಚಯ ಇರುತ್ತದೆ. ಸಾಕ್ಷಿಯು ಒಂದು ದಾಖಲೆಯ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಸ್ಥಳ ಮಹಜರ ಆಗಿದ್ದು, ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1 ಎ ಎಂದು ಗುರುತಿಸಲಾಯಿತು.

2. ನನ್ನ ಸಮಕ್ಷಮದಲ್ಲಿ ಪೋಲಿಸರು ಯಾವುದೇ ಸ್ಥಳ ಪಂಚನಾಮೆಯನ್ನು ಜರುಗಿಸಿರುವುದಿಲ್ಲ. ನಿಪಿ-1 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿರುವುದಿಲ್ಲ. ನಾನು ಸುಮಾರು 10 ವರ್ಷಗಳ ಹಿಂದೆ ನಿಡಗುಂದಿ ಪೋಲಿಸ ಠಾಣೆಗೆ ಹೋದಾಗ ನಿಪಿ-1 ಕ್ಕೆ ಸಹಿ ಮಾಡಿರುತ್ತೇನೆ.

**(ಈ ಹಂತದಲ್ಲಿ ಎಪಿಪಿ ರವರು ಈ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿಸಿ ಪಾಟಿ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು ಎ.ಪಿ.ಪಿ ವಕೀಲರಿಂದ</u>**

**1.** ದಿಃ14.06.2015 ರಂದು ಮಧ್ಯಾಹ್ನ 02.30 ರಿಂದ 03.00 ವರೆಗೆ ಚಾಸಾ-4 ರವರು ತೋರಿಸಿದಂತೆ ನಿಡಗುಂದಿ ಪಟ್ಟಣದಲ್ಲಿರುವ ಆರೋಪಿತರ ಮನೆಯ ಮುಂದೆ ಪೋಲಿಸರು ನನ್ನ ಮತ್ತು ಚಾಸಾ-3 ರವರು ಸಮಕ್ಷಮದಲ್ಲಿ ಸ್ಥಳ ಮಹಜರನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರ ಕಾಲದಲ್ಲಿ ಪೋಲಿಸರು ಒಂದು ಛಾಯಾಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

2. ಸಾಕ್ಷಿಯು ಒಂದು ಛಾಯಾಚಿತ್ರದಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಸದರಿ ಛಾಯಾಚತ್ರಿವನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ನ್ನು ಎಲ್ಲಿ ಮತ್ತು ಯಾವ ಉದ್ದೇಶಕ್ಕಾಗಿ ತೆಗೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನನಗೆ ಮಹಜರನ್ನು ಓದಿ ಹೇಳಿದ ನಂತರ ಪೋಲಿಸರು ನಿಪಿ-1 ಕ್ಕೆ ನನ್ನ ಮತ್ತು ಚಾಸಾ-3 ರವರು ಸಹಿಪಡೆದಿರುತ್ತಾರೆ ಎಂದರೆ ಸರಿಯಲ್ಲ.

3. ನನಗೆ ನಿಪಿ-1 ಮತ್ತು 2 ರಲ್ಲಿ ಬರೆದಿರುವ ಅಂಶಗಳು ಗೊತ್ತಿದ್ದರೂ ಕೂಡಾ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ- ಆರೋಪಿ ಪರವಾಗಿ ವಕೀಲರು ಇಲ್ಲ ಎಂದು ಹೇಳಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ,

**ಹೆಚ್ಚುವರಿ ಸಿವಿಲ್ ವ ಜೆ ಎಮ್ ಎಫ್ ಸಿ ನ್ಯಾಯಾಧೀಶರು,**
**ಬಸವನ ಬಾಗೇವಾಡಿ.**